# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1518 (1891)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

ವಿಷಯ : ತರಬೇತಿ ನೀಡುವ ತಾಂತ್ರಿಕ ಸಂಸ್ಥೆಗಳನ್ನು ಒಂದೆಡೆ ತರುವ ಬಗ್ಗೆ

(ಅ) ಉದ್ಯೋಗ ವಿನಿಮಯ ಕೇಂದ್ರಗಳ ಕಾರ್ಯಗಳು ಯುವಶಕ್ತಿಯನ್ನೇ ಮುಖ್ಯವಾಗಿ ಒಳಗೊಂಡಿರುವುದರಿಂದ, ಇದರ ಬಗ್ಗೆ ಸಾರ್ವಜನಿಕ ವಲಯದಲ್ಲಿರುವ ನಂಬಿಕೆ ಹಾಗೂ ವಿಶ್ವಾಸವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಆ) ರಾಜ್ಯದಲ್ಲಿ ತಾಂತ್ರಿಕ ಶಿಕ್ಷಣ ನೀಡುವ ಸಂಸ್ಥೆಗಳನ್ನು ಒಂದೆಡೆ ತರುವ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಇ) ಇಲಾಖೆಯ ತರಬೇತಿ ವಿಭಾಗದ ಕಾರ್ಯಚಟುವಟಿಕೆಗಳು ಸಂಪೂರ್ಣವಾಗಿ ತಾಂತ್ರಿಕ ಶಿಕ್ಷಣ ನೀಡುವುದೇ ಆಗಿರುವುದರಿಂದ, ಈ ವಿಭಾಗವನ್ನು ತಾಂತ್ರಿಕ ಶಿಕ್ಷಣ ಇಲಾಖೆಯೊಂದಿಗೆ ವಿಲೀನಗೊಳಿಸುವುದು ಸೂಕ್ತವಾಗಿದ್ದು, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಕೌಶಲ್ಯ ಮಿಷನ್‌ನ ಮುಖ್ಯ ಉದ್ದೇಶ ನಿರುದ್ಯೋಗ ಯುವಕ, ಯುವತಿಯರಿಗೆ ಕೌಶಲ್ಯ ತರಬೇತಿಗಳನ್ನು ನೀಡುವುದರ ಮುಖಾಂತರ ಉದ್ಯೋಗಾರ್ಹತೆಯನ್ನು ಹೆಚ್ಚಿಸಿ, ಉದ್ಯೋಗ ಕಲ್ಪಿಸಿಕೊಡುವುದಾಗಿದ್ದು, ಸದರಿ ಮಿಷನ್‌ನ ಚಟುವಟಿಕೆಗಳನ್ನು ಉದ್ಯೋಗ ವಿನಿಮಯ ಕೇಂದ್ರದ ಚಟುವಟಿಕೆಗಳೊಂದಿಗೆ ವಿಲೀನಗೊಳಿಸುವುದು ಸೂಕ್ತವಾಗಿರುವುದರಿಂದ ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)